ಜಿಲ್ಲಾಧಿಕಾರಿಗಳ ಹಾಗೂ
ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ
ಕೊಡಗು ಜಿಲ್ಲೆ, ಮಡಿಕೇರಿ-571201

ಕರ್ನಾಟಕ ಸರ್ಕಾರ

ಕಛೇರಿ: 08272-225500
ನಿವಾಸ: 08272-225700
ಫ್ಯಾಕ್ಸ್: 08272-225900
ಈ-ಮೇಲ್:deo.kodagu@gmail.com
ವೆಬ್ ಸೈಟ್: http://www.kodagu.nic.in

---

ಸಂ:ಎಂಎಜಿ/14/2019-20 ದಿನಾಂಕ:03.06.2019

## ಪತ್ರಿಕಾ ಪ್ರಕಟಣೆ

ವಿಷಯ: ಕೊಡಗು ಜಿಲ್ಲೆಯಲ್ಲಿ ಕೃಷಿ ಮತ್ತು ತೋಟಗಾರಿಕಾ ಚಟುವಟಿಕೆಗಳಿಗೆ ವಿದ್ಯುತ್ ಪ್ರವಾಹಕ ಏಣಿಗಳನ್ನು ಬಳಸಿ ಜೀವಹಾನಿಯಾಗಿರುವ ವಿಚಾರ.

------------

ಕೊಡಗು ಜಿಲ್ಲೆಯ ಹಲವು ಎಸ್ಟೇಟ್ / ತೋಟಗಳಲ್ಲಿ ಲೋಹದ ಏಣಿಗಳನ್ನು ಬಳಸಿ ಕೃಷಿ / ತೋಟಗಾರಿಕಾ ಚಟುವಟಿಕೆ ಮಾಡುತ್ತಿರುವ ಸಮಯದಲ್ಲಿ ಉಪಯೋಗಿಸುತ್ತಿದ್ದ ಏಣಿ ಜಾರಿ ವಿದ್ಯುತ್ ತಂತಿಗೆ ತಗುಲಿ ವಿದ್ಯುತ್ ಪ್ರವಾಹಿಸಿದ ಪರಿಣಾಮ ಮಾನವ ಜೀವಹಾನಿ ಆಗುತ್ತಿರುವ ವಿಚಾರ ವರದಿಯಾಗಿರುತ್ತದೆ. ಜಿಲ್ಲೆಯಲ್ಲಿ ಕಳೆದ 4 ½ ವರ್ಷಗಳಲ್ಲಿ ಲೋಹದ ಏಣಿಗಳ ಬಳಕೆಯಿಂದ ವಿದ್ಯುತ್ ಸ್ಪರ್ಶಗೊಂಡು 35 ಕಾರ್ಮಿಕರು ಮೃತಪಟ್ಟಿರುವುದು ಸಂಬಂಧಪಟ್ಟ ಇಲಾಖೆಗಳಲ್ಲಿ ದಾಖಲಾಗಿರುತ್ತದೆ.

ತೋಟಗಳಲ್ಲಿ ಬಳಸುವ ಲೋಹದ ಏಣಿಗಳು ಉತ್ತಮ ವಿದ್ಯುತ್ ವಾಹಕಗಳಾಗಿದ್ದು, ಇವುಗಳ ಉದ್ದ ಸಾಮಾನ್ಯವಾಗಿ 20 ಅಡಿಗಳಿಗಿಂತ ಅಧಿಕವಾಗಿರುತ್ತದೆ. ಜಿಲ್ಲೆಯ ಕೆಲವು ತೋಟ / ಎಸ್ಟೇಟ್‌ಗಳಲ್ಲಿ ಲೋಹದಿಂದ ನಿರ್ಮಿತವಾದ ಏಣಿಗಳ ಬದಲಾಗಿ ಫೈಬರ್, ಬಿದಿರು ಇತ್ಯಾದಿಗಳಿಂದ ನಿರ್ಮಿತವಾದ ವಿದ್ಯುತ್ ನಿರೋಧಕ ಏಣಿಗಳನ್ನು ಬಳಸಲಾಗುತ್ತಿದ್ದು, ಅಲ್ಲದೆ, ಇವುಗಳು ಶಾಖ ವಾಹಕಗಳಾಗಿರದೆ, ಕಠಿಣ ಹವಾಮಾನ ಪರಿಸ್ಥಿಗೆ ಉನ್ನತ ಪ್ರತಿರೋಧವನ್ನು ಹೊಂದಿರುತ್ತದೆ. ಲೋಹದಿಂದ ನಿರ್ಮಿತವಾದ ಏಣಿಗಳಿಗೆ ಹೋಲಿಸಿದಲ್ಲಿ ಈ ಏಣಿಗಳ ಬಳಕೆ ಅತ್ಯಂತ ಸುರಕ್ಷಿತವಾಗಿರುತ್ತದೆ ಮತ್ತು ವಿದ್ಯುತ್ ಆಘಾತವಾಗುವ ಯಾವುದೇ ಸಾಧ್ಯತೆಗಳಿರುವುದಿಲ್ಲ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿಯವರು ಮತ್ತು ಕಾರ್ಯನಿರ್ವಾಹಕ ಇಂಜಿನಿಯರ್, ಚೆಸ್ಕಾಂ ಇವರುಗಳು ತಮ್ಮ ವರದಿಯಲ್ಲಿ ದೃಢೀಕರಿಸಿರುತ್ತಾರೆ.

ಆದ್ದರಿಂದ ಸುರಕ್ಷತೆಯ ದೃಷ್ಠಿಯಿಂದ ವಿದ್ಯುತ್ ವಾಹಕ ಲೋಹದ ಏಣಿಗಳಿಗೆ ಪರ್ಯಾಯವಾಗಿ ವಿದ್ಯುತ್ ನಿರೋಧಕ ವಸ್ತುಗಳಾದ ಫೈಬರ್, ಬಿದಿರು ಇತ್ಯಾದಿಗಳಿಂದ ನಿರ್ಮಿತವಾದ ಏಣಿಗಳನ್ನು ಕೃಷಿ / ತೋಟಗಾರಿಕೆ ಮತ್ತು ಇನ್ನಿತರೆ ಯಾವುದೇ ಚಟುವಟಿಕೆಗಳಿಗೆ ಬಳಸುವ ಮೂಲಕ ಲೋಹ ನಿರ್ಮಿತ ಏಣಿಗಳಿಂದ ಉಂಟಾಗುತ್ತಿರುವ ವಿದ್ಯುತ್ ಅವಘಡಗಳನ್ನು ತಡೆಗಟ್ಟಲು ಜಿಲ್ಲೆಯ ಸಾರ್ವಜನಿಕರಲ್ಲಿ ಜಿಲ್ಲಾಡಳಿತ ಮನವಿ ಮಾಡುತ್ತದೆ.

ಜಿಲ್ಲಾಧಿಕಾರಿ,
ಕೊಡಗು ಜಿಲ್ಲೆ, ಮಡಿಕೇರಿ

Scanned by CamScanner